# ಕರ್ನಾಟಕಸರ್ಕಾರ
# ಕರ್ನಾಟಕಪರೀಕ್ಷಾಪ್ರಾಧಿಕಾರ
# ಬೆಂಗಳೂರು

**ಸಂಖ್ಯೆ:ಇಡಿ/ಕೆಇಎ/18/ನೇ.ವಿ/2026(ಆರ್ ಪಿ ಸಿ)** **ದಿನಾಂಕ: 11-07-2026**

## ಅಧಿಸೂಚನೆ

ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯ ಉಳಿಕೆ ಮೂಲ ವೃಂದದಲ್ಲಿ ಖಾಲಿಯಿರುವ ಗ್ರೂಪ್ – ಸಿ ವೃಂದದ ಭೂಮಾಪಕರ ಹುದ್ದೆಗಳಿಗೆ ನೇರ ನೇಮಕಾತಿ ಮಾಡುವ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಅಭ್ಯರ್ಥಿಗಳು ಸದರಿ ಹುದ್ದೆಗಳ ನೇಮಕಾತಿಗೆ ಅರ್ಹತೆ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು.

**ಭರ್ತಿ ಮಾಡಲು ಪ್ರಸ್ತಾವನೆ ಸಲ್ಲಿಸಲಾದ ಖಾಲಿ ಹುದ್ದೆಗಳ ವಿವರ;**

| ಕ್ರ. ಸಂ. | ಹುದ್ದೆಯವಿವರ | 2024 ರ ಪರಿಷ್ಕೃತ ರಾಜ್ಯ ವೇತನ ಶ್ರೇಣಿರೂ. | ಹುದ್ದೆಗಳಸಂಖ್ಯೆ |
|---|---|---|---|
| 1. | ಭೂಮಾಪಕರು | 37500-76100 | 560 ಹುದ್ದೆಗಳು |
| | | ಒಟ್ಟುಹುದ್ದೆಗಳಸಂಖ್ಯೆ | 560 |

ಷರಾ: (ಹುದ್ದೆವಾರು ಮತ್ತು ಪ್ರವರ್ಗವಾರು ವಿವರಗಳನ್ನು ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯು ನೀಡಿದಂತೆ ಪ್ರತ್ಯೇಕವಾಗಿ ಪ್ರಕಟಿಸಲಾಗುವುದು)

**1. ಶೈಕ್ಷಣಿಕವಿದ್ಯಾರ್ಹತೆ:-**

| ಕ್ರ. ಸ, | ಹುದ್ದೆ | ಶೈಕ್ಷಣಿಕ ವಿದ್ಯಾರ್ಹತೆ |
|---|---|---|
| 1 | ಭೂಮಾಪಕರು | a) ಕಾನೂನಿನಡಿಯಲ್ಲಿ ಸ್ಥಾಪಿತವಾದ ವಿಶ್ವವಿದ್ಯಾಲಯದಿಂದ ಇಂಜಿನಿಯರಿಂಗ್ ನಲ್ಲಿ ಅಥವಾ ತಂತ್ರಜ್ಞಾನದಲ್ಲಿ ಯಾವುದೇ ಪದವಿ ಹೊಂದಿರಬೇಕು; ಅಥವಾ ಯಾವುದೇ ಇಂಜಿನಿಯರಿಂಗ್ ಅಥವಾ ತಂತ್ರಜ್ಞಾನದಲ್ಲಿ ಎ.ಎಂ.ಐ.ಇ. ಪದವಿ ಹೊಂದಿರಬೇಕು.<br>**ಅಥವಾ**<br>b) ಕಾನೂನಿನಡಿಯಲ್ಲಿ ಸ್ಥಾಪಿತವಾದ ವಿಶ್ವವಿದ್ಯಾಲಯದಿಂದ ಗಣಿತ / ಭೌತಶಾಸ್ತ್ರ / ಕಂಪ್ಯೂಟರ್ ಸೈನ್ಸ್ / ಮಾಹಿತಿ ತಂತ್ರಜ್ಞಾನ / ಇನ್ಸ್ಟ್ರುಮೆಂಟೇಶನ್ / ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಶನ್ / ಕೃಷಿ ಬಿ.ಎಸ್. ಸಿ. ಪದವಿ ಪಡೆದಿರತಕ್ಕದ್ದು.<br>**ಅಥವಾ**<br>c) ಎ.ಐ.ಸಿ.ಟಿ.ಇ ಮಾನ್ಯತೆ ಪಡೆದ ಅಧಿಕೃತ ಸಂಸ್ಥೆಯಿಂದ ಇಂಜಿನಿಯರಿಂಗ್ / ತಂತ್ರಜ್ಞಾನದ ಯಾವುದೇ ವಿಭಾಗದಲ್ಲಿ ಡಿಪ್ಲೊಮಾ ಪಡೆದಿರತಕ್ಕದ್ದು. |

**ಸೂಚನೆ: ಮೇಲ್ಕಂಡ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಹೊರತುಪಡಿಸಿ, ಇತರೆ ವಿದ್ಯಾರ್ಹತೆಯಲ್ಲಿಅರ್ಜಿ ಸಲ್ಲಿಸಿ ಮುಂದಿನ ಪ್ರಕ್ರಿಯೆಯಲ್ಲಿ ಅನರ್ಹಗೊಂಡಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ, ಹಾಗೂ ಅಭ್ಯರ್ಥಿಯೇ ನೇರ ಹೊಣೆಗಾರರಾಗಿರುತ್ತಾರೆ.**

**2. ವಯೋಮಿತಿ:-**

ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷಗಳು ತುಂಬಿರತಕ್ಕದ್ದು ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025 ದಿನಾಂಕ 29-01-2026ರಲ್ಲಿಆದೇಶಿಸಿರುವಂತೆ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯಲ್ಲಿ 5

ವರ್ಷಗಳ ಸಡಿಲಿಕೆಯನ್ನು ನೀಡಿದ್ದು, ಈ ಹಿನ್ನೆಲೆಯಲ್ಲಿ ಅದನ್ನು ಅಳವಡಿಸಿಕೊಂಡ ನಂತರ ಅಭ್ಯರ್ಥಿಗಳು ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ವರ್ಗ | ನೇರ ನೇಮಕಾತಿ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿ |
|---|---|
| ಸಾಮಾನ್ಯಅರ್ಹತೆಯಅಭ್ಯರ್ಥಿಗಳಿಗೆ | 40ವರ್ಷಗಳು |
| ಪ್ರವರ್ಗ 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳಿಗೆ | 43ವರ್ಷಗಳು |
| ಪರಿಶಿಷ್ಟಜಾತಿ / ಪರಿಶಿಷ್ಟಪಂಗಡ /ಪ್ರವರ್ಗ-1 ಅಭ್ಯರ್ಥಿಗಳಿಗೆ | 45 ವರ್ಷಗಳು |

- ಮುಂದುವರೆದು, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ನಿರ್ದಿಷ್ಟ ಪಡಿಸಿರುವಂತೆ ಈ ಕೆಳಗಿನ ಸಂದರ್ಭದಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| ಅ. | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಮತ್ತು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| ಆ. | ಮಾಜಿ ಸೈನಿಕರಾಗಿದ್ದಲ್ಲಿ | ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದು ಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿ"ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಯನ್ನು ನೀಡ ಲಾಗುವುದು. "ಮಾಜಿ ಯೋಧ" ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ |
| ಇ. | National Cadet Corps ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| ಈ. | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| ಉ. | ವಿಶೇಷ ಚೇತನ ಅಭ್ಯರ್ಥಿಗಳಿಗೆ | 10 ವರ್ಷಗಳು |
| ಊ. | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು. |
| ಋ. | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ನಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ಸಕ್ಷಮ ಪ್ರಾಧಿಕಾರ ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು) | 10 ವರ್ಷಗಳು |
| ಎ. | ಜೀತ ಕಾರ್ಮಿಕರಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ | 10 ವರ್ಷಗಳು |

| | | |
|---|---|---|
| | ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾರೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡು, ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. | |

**3. ಅರ್ಜಿ ಸಲ್ಲಿಸುವ ವಿಧಾನ:-**

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್: https://cetonline.karnataka.gov.in/kea/ನಲ್ಲಿ ನೀಡಲಾಗುವ ಲಿಂಕ್ ಅನ್ನುಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿಮಾಡಬೇಕು. ಒಮ್ಮೆ ಸಲ್ಲಿಸಿದ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ / ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.ಅಭ್ಯರ್ಥಿಗಳು ಎಚ್ಚರಿಕೆಯಿಂದ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು ಅರ್ಜಿಸಲ್ಲಿಸಲು ಸೂಚಿಸಲಾಗಿದೆ.

**4. ಆನ್‌ಲೈನ್ ಅರ್ಜಿಸಲ್ಲಿಸಲು ವೇಳಾಪಟ್ಟಿ:**

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 11-07-2026 |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 07-08-2026 |
| ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | 10-08-2026 |

ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಭರ್ತಿ ಮಾಡುವ ಮೊದಲು ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಅಥವಾ ಸುಳ್ಳು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಯಾವುದೇ ಸಮಯದಲ್ಲಿ ಆದರೂ ಯಾವುದೇ ಮುನ್ಸೂಚನೆಯನ್ನು ನೀಡದೇ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ನಿಯಮಾನುಸಾರ ಅಂತಹವರ ವಿರುದ್ಧ ಸರ್ಕಾರವು / ಪ್ರಾಧಿಕಾರ / ಸಂಸ್ಥೆಯುಕಾನೂನಿನನ್ವಯ ಸೂಕ್ತ ಕ್ರಮಕೈಗೊಳ್ಳುವುದು.

**5. ಖಾಯಂ ಪೂರ್ವ ಅವಧಿ ಮತ್ತು ವೇತನ ಶ್ರೇಣಿ:**

i. **ಖಾಯಂ ಪೂರ್ವ ಅವಧಿ**: ನೇರ ನೇಮಕಾತಿ ಮೂಲಕ ಆಯ್ಕೆಗೊಂಡ ಆಭ್ಯರ್ಥಿಗಳು ಎರಡು ವರ್ಷ ಖಾಯಂ ಪೂರ್ವ ಅವಧಿಯಲ್ಲಿರುತ್ತಾರೆ. (ಈ ಅವಧಿಯಲ್ಲಿ "ಕಡ್ಡಾಯ ತರೇತಿ" ಪರೀಕ್ಷೆಯಲ್ಲಿ ಎಲ್ಲಾ ಭೂಮಾಪಕರು ಇಲಾಖೆಯ ಭೂಮಾಪನಾ ತರಬೇತಿ ಸಂಸ್ಥೆಯಲ್ಲಿ ಆರು ತಿಂಗಳ ಅವಧಿಗೆ ವೃತ್ತಿ ಬುನಾದಿ ಭೂಮಾಪನ ತರಬೇತಿಯನ್ನು ಯಶಸ್ವಿಯಾಗಿ ಪೂರೈಸಬೇಕು ಮತ್ತು ಸಂಸ್ಥೆಯು ನಡೆಸುವ ಸೈದ್ಧಾಂತಿಕ ಪರೀಕ್ಷೆಯಲ್ಲಿ 35% ಮತ್ತು ಪ್ರಾಯೋಗಿಕ ಪರೀಕ್ಷೆಯಲ್ಲಿ 40% ಅಂಕಗಳೊಂದಿಗೆ ಅಂತಿಮ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು. ಆದಾಗ್ಯೂ ವಿಫಲರಾದ ಭೂಮಾಪಕರಿಗೆ ಖಾಯಂ ಪೂರ್ವಾವಧಿಯೊಳಗೆ ಪರೀಕ್ಷೆಗೆ ಹಾಜರಾಗಲು ಮತ್ತು ಉತ್ತೀರ್ಣರಾಗಲು ಇನ್ನೊಂದು ಅವಕಾಶವನ್ನು ನೀಡಲಾಗುವುದು. ನೌಕರರು ತರಬೇತಿಯಲ್ಲಿ ಉತ್ತೀರ್ಣರಾಗಲು ವಿಫಲವಾದರೆ, ಆ ನೌಕರರುಗಳ ಖಾಯಂ ಪೂರ್ವಾವಧಿಯನ್ನು "ಯಶಸ್ವಿ" ಎಂದು ಘೋಷಿಸಲಾಗುವುದಿಲ್ಲ ಮತ್ತು ವಿಫಲ ನೌಕರರಿಗೆ ಸಂಬಂಧಿಸಿದಂತೆ ಕರ್ನಾಟಕ ನಾಗರಿಕ ಸೇವೆಗಳ (ಪ್ರೊಬೇಷನರಿ) ನಿಯಮಗಳು, 1977 ರ ನಿಬಂಧನೆಗಳು ಅನ್ವಯಿಸಲಾಗುತ್ತದೆ. ತರಬೇತಿಯಲ್ಲಿ ಅನುತ್ತೀರ್ಣರಾದ ನೌಕರರನ್ನು ಸೇವೆಯಿಂದ ತೆಗೆದುಹಾಕಲಾಗುತ್ತದೆ.)

ii. **ವೇತನ ಶ್ರೇಣಿ**: 2024 ರ ಪರಿಷ್ಕೃತ ರಾಜ್ಯ ವೇತನ ಶ್ರೇಣಿ ಅನ್ವಯ;

ರೂ.**37500-900-39300-1000-43300-1125-47800-1250-52800-1375-58300-1500-64300-1650-74200-1900-76100**

**6. ಪಿಂಚಣಿ / ಯೋಜನೆ ಸೌಲಭ್ಯ ಕುರಿತು:**

i. ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ(ಎಸ್ ಪಿ ಎಲ್) 04 ಪಿಇಟಿ 2005, ದಿನಾಂಕ: 31.03.2006 ರಂತೆ ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್.ಪಿ.ಎಸ್) ಸೌಲಭ್ಯ ಅನ್ವಯವಾಗುವುದು.

7. **ಶುಲ್ಕ:**

ಆನ್‌ಲೈನ್ ಮೂಲಕ ಮಾತ್ರ ಶುಲ್ಕ ಪಾವತಿಸಬೇಕಾಗಿರುತ್ತದೆ.

| ವಿವರಗಳು | ಶುಲ್ಕ | |
|---|---|---|
| ಸಾಮಾನ್ಯ ಅರ್ಹತೆ ಮತ್ತು ಇತರೆ ಪ್ರವರ್ಗಗಳು (ಪ್ರವರ್ಗ-2ಎ / 2ಬಿ / 3ಎ / 3ಬಿ) | 750/- | ಪಾವತಿಸಿದ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ. |
| ಪರಿಶಿಷ್ಟಜಾತಿ / ಪರಿಶಿಷ್ಟಪಂಗಡ / ಪ್ರವರ್ಗ-1 / ಮಾಜಿ ಸೈನಿಕ / ತೃತೀಯಲಿಂಗದ ಅಭ್ಯರ್ಥಿಗಳು | 500/- | |
| ವಿಶೇಷಚೇತನ ಅಭ್ಯರ್ಥಿಗಳಿಗೆ | 250/- | |

8. **ಪರೀಕ್ಷಾ ದಿನಾಂಕಗಳ ವಿವರ**

| | | |
|---|---|---|
| ಶನಿವಾರ | 03-10-2026 (ಮಧ್ಯಾಹ್ನ 3.00 ರಿಂದ 5.00) | ಪತ್ರಿಕೆ II (ನಿರ್ದಿಷ್ಟ ಪತ್ರಿಕೆ) |
| ಭಾನುವಾರ | 04-10-2026 (ಬೆಳಿಗ್ಗೆ 10.30 ರಿಂದ 12.30) | ಪತ್ರಿಕೆ I (ಸಾಮಾನ್ಯ ಜ್ಞಾನ) |
| ಕನ್ನಡ ಭಾಷಾ ಪರೀಕ್ಷೆ | ನಂತರದಲ್ಲಿ ತಿಳಿಸಲಾಗುವುದು | |

9. **ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:**

I. ಮೇಲ್ಕಂಡ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು **ಆಫ್‌ಲೈನ್-ಒಎಂಆರ್ ಮಾದರಿ (Offline-OMR type)**ಯಲ್ಲಿ ನಡೆಸಲಾಗುವುದು.
ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುವ ಪರೀಕ್ಷಾ ಕೇಂದ್ರದ ವಿವರವನ್ನು ನಂತರದಲ್ಲಿ ತಿಳಿಸಲಾಗುವುದು.

II. ಅಭ್ಯರ್ಥಿಗಳಿಗೆ ಪರೀಕ್ಷೆಯ ಪ್ರವೇಶಪತ್ರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಪ್ಯಾನ್‌ಕಾರ್ಡ್ / ವಾಹನ ಚಾಲನಾ ಪರವಾನಗಿ / ಆಧಾರ್‌ಕಾರ್ಡ್ / ಪಾಸ್‌ಪೋರ್ಟ್ / ವೋಟರ್‌ಐಡಿ / ಸರ್ಕಾರಿ ನೌಕರರ ಐಡಿ) ಪರೀಕ್ಷಾ ಕೇಂದ್ರಗಳಿಗೆ ಹೋಗಬೇಕು. ತಪ್ಪಿದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.
**(ಪರೀಕ್ಷಾ ಕೇಂದ್ರವನ್ನು ಯಾವುದೇ ಕಾರಣಕ್ಕೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ)**

10. **ಕನ್ನಡ ಭಾಷಾ ಪರೀಕ್ಷೆ:**

ಅಭ್ಯರ್ಥಿಯು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ ರಾಜ್ಯ ಸರ್ಕಾರವು ಅದಕ್ಕೆ ತತ್ಸಮಾನವೆಂದು ಘೋಷಿಸಿದ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿಗಿಂತ ಉನ್ನತ ಮಟ್ಟದ ಪರೀಕ್ಷೆಗಳಲ್ಲಿ ಕನ್ನಡ ವಿಷಯವನ್ನು ಪ್ರಥಮ ಮತ್ತು ದ್ವಿತೀಯ ಭಾಷೆಯಾಗಿ ಅಭ್ಯಾಸ ಮಾಡಿದ್ದರೆ ಅಥವಾ ಕನ್ನಡ ಮಾಧ್ಯಮದಲ್ಲಿ ಅಧ್ಯಯನ ಮಾಡಿ ಇಂತಹ ಪರೀಕ್ಷೆಗಳನ್ನು ಪಾಸುಮಾಡಿದ್ದರೆ ಅಥವಾ ಆಯೋಗ ಅಥವಾ ಇನ್ನಿತರ ಯಾವುದೇ ಆಯ್ಕೆ ಪ್ರಾಧಿಕಾರವು ಈ ಹಿಂದೆ ನಡೆಸಿದ ಕನ್ನಡ ಭಾಷೆಯ ಪರೀಕ್ಷೆಯಲ್ಲಿ (ಕಡ್ಡಾಯ ಕನ್ನಡ ಪರೀಕ್ಷೆ) ಉತ್ತೀರ್ಣರಾಗಿದ್ದರೆ, ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ನೀಡಲಾಗುತ್ತದೆ. ಇಲ್ಲವಾದಲ್ಲಿ, ಕಡ್ಡಾಯ ಕನ್ನಡ ಭಾಷಾಪರೀಕ್ಷೆಯು ಬಹು ಆಯ್ಕೆಮಾದರಿ ಪತ್ರಿಕೆಯಾಗಿದ್ದು, ಗರಿಷ್ಠ 150 ಅಂಕಗಳನ್ನು ಒಳಗೊಂಡಿರುತ್ತದೆ ಮತ್ತು ಅಭ್ಯರ್ಥಿಗಳು ಇದರಲ್ಲಿ ಅರ್ಹತೆ ಗಳಿಸಲು ಕನಿಷ್ಠ 50 ಅಂಕಗಳನ್ನು ಗಳಿಸತಕ್ಕದ್ದು. ಗೈರುಹಾಜರಾದ / ಕನಿಷ್ಠ 50 ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಆಯ್ಕೆಪ್ರಕ್ರಿಯೆಗೆ

ಅರ್ಹರಾಗುವುದಿಲ್ಲ. ಈ ಪ್ರಶ್ನೆ ಪತ್ರಿಕೆಯನ್ನು ಎಸ್.ಎಸ್.ಎಲ್.ಸಿ ಹಂತದಲ್ಲಿನ ಪ್ರಥಮ ಭಾಷೆ ಕನ್ನಡವನ್ನು ಮಾನದಂಡವನ್ನಾಗಿಟ್ಟುಕೊಂಡು ಸಿದ್ಧಪಡಿಸಲಾಗುವುದು. ಕಡ್ಡಾಯ ಕನ್ನಡ ಭಾಷಾಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಜ್ಯೇಷ್ಠತೆಗೆ ಅಥವಾ ಹುದ್ದೆಗಳ ಆಯ್ಕೆಗೆ ಪರಿಗಣಿಸುವುದಿಲ್ಲ.

**11. ಪ್ರಶ್ನೆಪತ್ರಿಕೆ:**

| ಪತ್ರಿಕೆ / Paper | ವಿಷಯ / Subject | ಒಟ್ಟು ಪ್ರಶ್ನೆಗಳು / Total Questions | ಗರಿಷ್ಠ ಅಂಕಗಳು / Total Marks | ಅವಧಿ / Duration (ಗಂಟೆ / Hours) |
|---|---|---|---|---|
| **ಪತ್ರಿಕೆ-1** | **ಸಾಮಾನ್ಯ ಜ್ಞಾನ**<br><br>**ಎ)** ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ಸಾಮಾನ್ಯ ಜ್ಞಾನದ ವಿಷಯಗಳು. **ಬಿ)** ದೈನಂದಿನ ಗ್ರಹಿಕೆಯ ವಿಷಯಗಳು. **ಸಿ)** ಭಾರತದ ಸಂವಿಧಾನದ ಸ್ಥೂಲ ನೋಟದ ವಿಷಯಗಳು. **ಡಿ)** ವಿಶೇಷವಾಗಿ ಕರ್ನಾಟಕಕ್ಕೆ ಸಂಬಂಧಿಸಿದ ಭಾರತದ ಇತಿಹಾಸ. **ಇ)** ಕರ್ನಾಟಕಕ್ಕೆ ಸಂಬಂಧಿಸಿದಂತೆ ಭಾರತದ ಭೂಗೋಳ ವಿಷಯಗಳು. **ಎಫ್)** ರಾಜ್ಯ ಮತ್ತು ಪ್ರಾದೇಶಿಕ ಆಡಳಿತ ಕುರಿತ ವಿಷಯಗಳು. **ಜಿ)** ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳಿಗೆ ಸಂಬಂಧಿಸಿದ ಉಪಕ್ರಮಗಳನ್ನು ಒಳಗೊಂಡಂತೆ ಕರ್ನಾಟಕದ ಆರ್ಥಿಕತೆಯ ಅಭಿವೃದ್ಧಿ ಕುರಿತ ವಿಷಯಗಳು. **ಎಫ್)** ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು. | 100 | 100 | 2 ಗಂಟೆ |
| **ಪತ್ರಿಕೆ-2** | ನಿರ್ದಿಷ್ಟ ಪತ್ರಿಕೆ **(ಪಠ್ಯಕ್ರಮ ಪ್ರತ್ಯೇಕವಾಗಿ ಪ್ರಕಟಿಸಿದೆ)** | 100 | 100 | 2 ಗಂಟೆ |

i. **ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಯು ಅರ್ಹತೆಗಾಗಿ ಕನಿಷ್ಠ ಶೇ.35 ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ.** ಕನಿಷ್ಠ ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಗೆ ಅನರ್ಹರಾಗುತ್ತಾರೆ.

**12. ಋಣಾತ್ಮಕ ಮೌಲ್ಯಮಾಪನ(Negative Valuation):**

i. ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು. ಪ್ರತಿ ತಪ್ಪುಉತ್ತರಕ್ಕೆ ನಾಲ್ಕನೇ ಒಂದಂಶದಷ್ಟು**0.25**ಅಂಕಗಳನ್ನುಕಳೆಯಲಾಗುವುದು.

ii. ಒ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ 5ನೇ ಆಯ್ಕೆ / ವೃತ್ತವನ್ನುನೀಡಿದ್ದು, ಉತ್ತರಿಸದೇ ಇರುವ ಪ್ರಶ್ನೆಗಳಿಗೆ ಐದನೇ ಆಯ್ಕೆ / ವೃತ್ತವನ್ನು ಶೇಡ್ ಮಾಡಲು ಕೊನೆಯಬೆಲ್ ಆದನಂತರ ಹೆಚ್ಚುವರಿಯಾಗಿ ಐದು ನಿಮಿಷಗಳನ್ನು ನೀಡಲಾಗುವುದು. ಯಾವುದೇ ಆಯ್ಕೆಯನ್ನು / ವೃತ್ತವನ್ನು ಶೇಡ್ ಮಾಡಿಲ್ಲದಿದ್ದರೆ, ಪ್ರತಿ ಪ್ರಶ್ನೆಗೆ **0.25** ಅಂಕಗಳನ್ನು ಕಡಿತಗೊಳಿಸಲಾಗುತ್ತದೆ.

**13. ಅರ್ಹತಾ ಷರತ್ತುಗಳು:**

i. ಭಾರತೀಯ ನಾಗರೀಕನಾಗಿರತಕ್ಕದ್ದು.

ii. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

iii. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

iv. ದೈಹಿಕ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

v. ಕೇಂದ್ರ ಅಥವಾ ಕರ್ನಾಟಕ ರಾಜ್ಯ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

vi. **ಯಾವುದೇ ನೈತಿಕ ಪರಿಭಾಷೆಗೆ ಶಿಕ್ಷೆಗೆ ಒಳಪಟ್ಟ ವ್ಯಕ್ತಿ ಅಥವಾ ಕೇಂದ್ರ ಅಥವಾ ಕರ್ನಾಟಕ ರಾಜ್ಯ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು ಸರ್ಕಾರವು ಎಲ್ಲಾ ಸಂದರ್ಭಗಳನ್ನು ಮರುಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ ನೇಮಕಾತಿಗೆ ಅರ್ಹರಾಗುವುದಿಲ್ಲ.**

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**14. ಜಾತಿ / ಮೀಸಲಾತಿಪ್ರಮಾಣಪತ್ರಗಳು:**

ಮೀಸಲಾತಿ ಕೋರಿ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು;

1. ಪರಿಶಿಷ್ಟಜಾತಿ ಮತ್ತು ಪರಿಶಿಷ್ಟಪಂಗಡಕ್ಕೆ ಸೇರಿದ ಅಭ್ಯರ್ಥಿಗಳು - ನಮೂನೆ'ಡಿ';
2. ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು - ನಮೂನೆ'ಇ';
3. ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು - ನಮೂನೆ'ಎಫ್'.

ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣಪತ್ರವನ್ನು ಸಂಬಂಧಿತ ತಹಶೀಲ್ದಾರ್‌ರವರಿಂದ ಅಂದರೆ ತಹಶೀಲ್ದಾರ್ ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟಜಾತಿ, ಪರಿಶಿಷ್ಟಪಂಗಡಮತ್ತು ಪ್ರವರ್ಗ-1 ರ ಮೀಸಲಾತಿ ಪ್ರಮಾಣಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣಪತ್ರ ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.

ಮೂಲದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣಪತ್ರದ ಮೂಲಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ,ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. (ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗುವುದು). ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣಪತ್ರಗಳನ್ನು ತಿರಸ್ಕರಿಸಲಾಗುವುದು.

ಉದ್ಯೋಗಕ್ಕಾಗಿ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಮಾತ್ರ ಪರಿಗಣಿಸಲಾಗುವುದು (ಶಿಕ್ಷಣ ಅಥವಾ ಇತರೆ ಸೌಲಭ್ಯಗಳಿಗೆ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ).

**ವಿಶೇಷ ಸೂಚನೆ**: ಸರ್ಕಾರದ ಆದೇಶಸಂಖ್ಯೆ: ಸಕಇ 179 ಬಿಸಿಎ 2010, ದಿನಾಂಕ: 16.07.2011 ರನ್ವಯಬಲಿಜ ಮತ್ತು ಉಪಜಾತಿಗಳಾದ ಬಲಜಿಗ / ಬಣಜಿಗ / ಗೌಡಬಣಜಿಗ, ನಾಯ್ಡು, ತೆಲಗಬಲಿಜ / ತೆಲಗಬಣಜಿಗ / ಶೆಟ್ಟಿಬಲಿಜ, ಶೆಟ್ಟಿಬಣಜಿಗ / ಬಣಜಿಗಶೆಟ್ಟಿ, ದಾಸರಬಲಿಜ / ದಾಸರಬಲಜಿಗ / ದಾಸರಬಣಜಿಗ / ದಾಸಬಣಜಿಗ, ಕಸ್ಬನ್, ಮುನ್ನೂರ / ಮುನ್ನಾರ್ / ಮುನ್ನೂರುಕಾಪು, ಬಳಿಗಾರ / ಬಳೆಬಣಜಿಗ / ಬಳೆಬಲಜಿಗ / ಬಳಿಜೆಟ್ಟಿ / ಬಣಗಾರ, ರೆಡ್ಡಿ(ಬಲಿಜ), ಜನಪ್ಪನ್, ಉಪ್ಪಾರ(ಬಲಿಜ),

ತುಲೇರು(ಬಲಿಜ) ಉಪಜಾತಿಗಳನ್ನು ಶಿಕ್ಷಣದ ಸಲುವಾಗಿ 2ಎ ಮೀಸಲಾತಿಯಡಿ ಹಾಗೂ ಉದ್ಯೋಗದ ಸಲುವಾಗಿ 3ಎ ಮೀಸಲಾತಿಯಡಿ ಪರಿಗಣಿಲಾಗಿದೆ. ಆದ್ದರಿಂದ ಸದರಿ ಆದೇಶದನುಸಾರ ಸದರಿ ಜಾತಿ / ಉಪಜಾತಿಯ ಅಭ್ಯರ್ಥಿಗಳು ಉದ್ಯೋಗದಲ್ಲಿನ ಮೀಸಲಾತಿಗಾಗಿ ಆನ್‌ಲೈನ್ ಅರ್ಜಿಯಲ್ಲಿ ಕಡ್ಡಾಯವಾಗಿ 3ಎ ಮೀಸಲಾತಿ ಕೋರತಕ್ಕದ್ದು ಹಾಗೂ ಶಿಕ್ಷಣದ ಸಲುವಾಗಿ ಪಡೆದ 2ಎ ಮೀಸಲಾತಿ ಪ್ರಮಾಣ ಪತ್ರವನ್ನು ಪರಿಗಣಿಸಲಾಗುವುದಿಲ್ಲ.

*(ಇತರೆ ಹಿಂದುಳಿದವರ್ಗಗಳಾದ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ವಿವಾಹಿತ ಮಹಿಳಾ ಅಭ್ಯರ್ಥಿಗಳು ಅವರ ಪತಿಯ ಹೆಸರಿನೊಂದಿಗೆ ಜಾರಿಯಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಅರ್ಜಿಸಲ್ಲಿಸಲು ನಿಗದಿಗೊಳಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿಯಲ್ಲಿ ಮೀಸಲಾತಿ ಕೋರತಕ್ಕದ್ದು).*

**15. ಮಾಜಿಸೈನಿಕ:**

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 13 ಎಸ್‌ಆರ್‌ಆರ್ 92 ದಿನಾಂಕ 01-04-1992 ಮತ್ತು ಅಧಿಸೂಚನೆಸಂಖ್ಯೆ: ಡಿಪಿಎಆರ್ 28 ಎಸ್‌ಆರ್‌ಆರ್ 95 ದಿನಾಂಕ 21-10-1995 ರನ್ವಯ ನೇರನೇಮಕಾತಿಗಳಲ್ಲಿ ಶೇಕಡ 10 ರಷ್ಟು ಹುದ್ದೆಗಳನ್ನು ಮಾಜಿಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

1. ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿಕೋರ್, ಜನರಲ್ ಸರ್ವೆ ಇಂಜಿನಿಯರಿಂಗ್ ಕೋರ್ಸು ಲೋಕಸಹಾಯಕ ಸೇವೆ ಮತ್ತು ಪ್ಯಾರಾಮಿಲಿಟರಿ ದಳದಲ್ಲಿ ಸೇವೆಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು
2. ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.
3. ಅ). ಅಂತಹ ಸೇವೆಯಿಂದ ನಿವೃತ್ತಿಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವವರು;

   ಅಥವಾ

   ಆ). ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವರು

   ಅಥವಾ

   ಇ). ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿಗಳು.

   ಅಥವಾ

   ಈ). ತಮ್ಮ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿಗಳು ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿಗಳು ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:-

   i. ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಿಣಿದಾರರು.
   ii. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿಗಳು.
   iii. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು ಅರ್ಹರಾಗಿರುವುದಿಲ್ಲ.

**ವಿವರಣೆ**: ಕೇಂದ್ರ ಸಶಸ್ತ್ರದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿ ಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರಿಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು

ಸಲ್ಲಿಸಬೇಕು. ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು / ಮಾಜಿ ಸೈನಿಕರ ಅವಲಂಬಿತರು ಮಾಜಿಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಮೂಲದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸಬೇಕು. (ಪ್ರಮಾಣಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗುವುದು).

**16. ಗ್ರಾಮೀಣ ಅಭ್ಯರ್ಥಿ:**

ಸರ್ಕಾರಿ ಅಧಿಸೂಚನೆ ಸಂಖ್ಯೆ: 59 ಶಾಸನ 2000, ದಿನಾಂಕ 06-01-2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರಿ ಆದೇಶಸಂಖ್ಯೆ: ಸಿಆಸುಇ 08 ಸೆನೆನಿ 2001 ದಿನಾಂಕ 13-02-2001 ರನ್ವಯ ನಮೂನೆ-2 ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 (NCLC) ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಮೂಲದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ. ಈ ಪ್ರಮಾಣ ಪತ್ರಗಳ ನಮೂನೆ ಪ್ರತ್ಯೇಕವಾಗಿ ನೀಡಲಾಗುವುದು).

**17. ಕನ್ನಡ ಮಾಧ್ಯಮ ಅಭ್ಯರ್ಥಿ:**

ಸರ್ಕಾರಿ ಅಧಿಸೂಚನೆ ಸಂಖ್ಯೆ: ಸಿಆಸುಇ 71 ಸೆನೆನಿ 2001 ದಿನಾಂಕ 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನುಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕ.ಮಾ.ಅ. ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗುವುದು).

**18. ಯೋಜನೆಗಳಿಂದ ನಿರ್ವಸಿತರಾದ ಅಭ್ಯರ್ಥಿಗಳು;**

ಸರ್ಕಾರದ ಆದೇಶಸಂಖ್ಯೆ: ಸಿಆಸುಇ 23 ಸೆನೆನಿ 99, ದಿನಾಂಕ 23.11.2000 ಮತ್ತು ತಿದ್ದುಪಡಿ ಆದೇಶಸಂಖ್ಯೆಸಿಆಸುಇ 252 ಸೆನೆನಿ 2020 (ಭಾಗ-1), ದಿನಾಂಕ 07.07.2021. ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 25 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

**19. ವಿಶೇಷ ಚೇತನ ಅಭ್ಯರ್ಥಿಗಳಿಗೆ:**

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ/149/ಎಸ್‌ಆರ್‌ಆರ್/2020, ದಿನಾಂಕ: 25.09.2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳಗ್ರೂಪ್ – ಬಿ ಹುದ್ದೆಗಳಿಗೆ ಶೇ. 4 ರಷ್ಟು ಮತ್ತು ಗ್ರೂಪ್ – ಸಿಹುದ್ದೆಗಳಿಗೆ ಶೇ. 5 ರಷ್ಟು ಸಮತಳ ಮೀಸಲಾತಿಯನ್ನು ಕಲ್ಪಿಸಲಾಗಿದ್ದು, ಶೇ. 40 ಕ್ಕಿಂತ ಕಡಿಮೆ ಇಲ್ಲದಂತಹ ನ್ಯೂನತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ/115/ಸೆನೆನಿ/2005 ದಿನಾಂಕ 19-11-2005 ರಲ್ಲಿ ನಿಗದಿ ಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010 ದಿನಾಂಕ 18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ / ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣಪತ್ರ/ UDID ಪ್ರಮಾಣಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರು ಪಡಿಸತಕ್ಕದ್ದು, ಹಾಗೂ ನೇಮಕಾತಿ ಪ್ರಾಧಿಕಾರಗಳು ನಡೆಸುವ ವೈದ್ಯಕೀಯ ಮಂಡಳಿ ಪರಿಶೀಲನೆಗೆ ಹಾಜರಾಗಿ ನಿಯಮಾನುಸಾರ ಅರ್ಹತೆಗಳಿಸಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ವಿಶೇಷ ಚೇತನ ಮೀಸಲಾತಿಯನ್ನು ರದ್ದು ಪಡಿಸಲಾಗುವುದು.

**20. ತೃತೀಯ ಲಿಂಗದ ಅಭ್ಯರ್ಥಿಗಳಿಗೆ:**

ಸರ್ಕಾರದ ಅಧಿಸೂಚನೆ ಸಂಖ್ಯೆಸಿಆಸುಇ 179 ಸೇನೆನಿ 2020 ದಿನಾಂಕ:06-07-2021 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-'ಎ', 'ಬಿ', 'ಸಿ'ಮತ್ತು 'ಡಿ 'ಗುಂಪಿನ ಹುದ್ದೆಗಳಿಗೆ ಸಾಮಾನ್ಯವರ್ಗ, ಪರಿಶಿಷ್ಟಜಾತಿಗಳು, ಪರಿಶಿಷ್ಟಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಿಂದ ಶೇಕಡ 1 (ಒಂದರಷ್ಟು) ರಷ್ಟು ಹುದ್ದೆಗಳನ್ನು ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಾತಿಕಲ್ಪಿಸಿದ್ದು, ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿಸಲ್ಲಿಸುವಂತಹ ಅಭ್ಯರ್ಥಿಗಳು ಕೇಂದ್ರ ಅಧಿನಿಯಮ ತೃತೀಯಲಿಂಗ ವ್ಯಕ್ತಿಗಳ (ಹಕ್ಕುಗಳರಕ್ಷಣೆ) 2019 ರಲ್ಲಿ ನಿಗದಿಪಡಿಸಿರುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪ್ರಮಾಣಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕ ದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡಿರತಕ್ಕದ್ದು. ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದು ಪಡಿಸಲಾಗುವುದು.

**21. ಪ್ರಾಧಿಕಾರದೊಡನೆ ಪತ್ರವ್ಯವಹಾರ;**

ಪ್ರಾಧಿಕಾರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು. ಅಭ್ಯರ್ಥಿಗಳು ಪ್ರಾಧಿಕಾರದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯು ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

(i) ಅರ್ಜಿಸಂಖ್ಯೆ ಮತ್ತು ಹುದ್ದೆಯ / ವಿಷಯದ ಹೆಸರು

(ii) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿಅಕ್ಷರಗಳಲ್ಲಿ)

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆವಿಳಾಸ

- ಪ್ರಾಧಿಕಾರದ ಅಧಿಕೃತ 'X' ಖಾತೆ @KEA_KARNATAKA ದಲ್ಲಿ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ನೇಮಕಾತಿ ಸಂಬಂಧದ ಎಲ್ಲಾ ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.

**22. ಪ್ರಮುಖವಾದ ಸೂಚನೆಗಳು:**

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು (Recent photograph in JPEG format, with a file size between 50KB to 200KB) ಹಾಗೂ ಕಪ್ಪು ಶಾಹಿಯ ಸ್ಕೆಚ್ / ಮಾರ್ಕರ್ಪೆನ್‌ನಲ್ಲಿ ಸಹಿಯನ್ನು (Signature in JPEG format, with a file size between 50KB to 70KB) ಅಳತೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು ಅಪ್‌ಲೋಡ್ ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣಪತ್ರಗಳನ್ನು ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿ ಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದಿಟ್ಟು ಕೊಂಡು ಮೂಲದಾಖಲಾತಿಯ

ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಅದೇ ಮೀಸಲಾತಿ ಪ್ರಮಾಣಪತ್ರದ ಹಾಗೂ ಇತರೇ ಪ್ರಮಾಣಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ಮೀಸಲಾತಿ ಪ್ರಮಾಣಪತ್ರಗಳನ್ನು ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು, ನಂತರ ಪಡೆದ ಯಾವುದೇ ಪ್ರಮಾಣಪತ್ರಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೆಯೇ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಮತ್ತು ತಪ್ಪಿದ್ದಲ್ಲಿ ಸದರಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು / ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪಡೆದಿಟ್ಟುಕೊಳ್ಳಬೇಕಾದ ಪ್ರಮಾಣಪತ್ರಗಳು.

1. ಆಧಾರ್‌ಕಾರ್ಡ್
2. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದ ಆಯಾ ಹುದ್ದೆಗಳಿಗೆ ನಿಗದಿಪಡಿಸಲಾದ / ವಿದ್ಯಾರ್ಹತೆಯ ಎಲ್ಲಾ ವಿಷಯಗಳ / ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರ / ಪಿಡಿಸಿ.
3. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ / ಶಾಲೆಯ ವರ್ಗಾವಣೆ ಪ್ರಮಾಣಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತಭಾಗ.
4. ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣಪತ್ರ ಮತ್ತು ಪಿಂಚಣಿ / ಗ್ರ್ಯಾಚ್ಯುಟಿ ಪಡೆಯುತ್ತಿರುವ ಪ್ರಮಾಣಪತ್ರ / ಮಾಜಿಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಶಾಶ್ವತವಾಗಿ ಅಂಗವಿಕಲರಾದ (Permanently Disbaled) ಪ್ರಮಾಣಪತ್ರ (ಮಾಜಿಸೈನಿಕ ಮೀಸಲಾತಿ ಕೋರಿದ್ದಲ್ಲಿ)
5. ಪರಿಶಿಷ್ಟಜಾತಿ, ಪರಿಶಿಷ್ಟಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
6. ಗ್ರಾಮೀಣ ಮೀಸಲಾತಿ ಪ್ರಮಾಣಪತ್ರ ನಮೂನೆ-1 ಮತ್ತು 2ರಲ್ಲಿ (ಗ್ರಾಮೀಣ ಮೀಸಲಾತಿ ಕೋರಿದ ಸಾಮಾನ್ಯ ಅರ್ಹ ಅಭ್ಯರ್ಥಿಗಳು ನಮೂನೆ-1 ರಲ್ಲಿ ಮಾತ್ರ ಹಾಗೂ ಗ್ರಾಮೀಣ ಮೀಸಲಾತಿಕೋರಿದ ಪರಿಶಿಷ್ಟಜಾತಿ / ಪರಿಶಿಷ್ಟಪಂಗಡ / ಪ್ರವರ್ಗ-1 / ಪ್ರವರ್ಗ-2ಎ / ಪ್ರವರ್ಗ-2ಬಿ / ಪ್ರವರ್ಗ- 3ಎ / ಪ್ರವರ್ಗ- 3ಬಿ ಅಭ್ಯರ್ಥಿಗಳು ನಮೂನೆ - 2 ರಲ್ಲಿ ಮಾತ್ರ)
7. ಕನ್ನಡಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣಪತ್ರ (ಮೀಸಲಾತಿಕೋರಿದ್ದಲ್ಲಿ)
8. ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪಡೆದ ತೃತೀಯಲಿಂಗದ ಪ್ರಮಾಣಪತ್ರ (ಮೀಸಲಾತಿ ಕೋರಿದ್ದಲ್ಲಿ)
9. ಸೇವೆಯಲ್ಲಿರುವ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ನಿರಾಕ್ಷೇಪಣ ಪ್ರಮಾಣಪತ್ರಗಳನ್ನು ಪಡೆದು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು (ನಿಗದಿಪಡಿಸಿದ್ದಲ್ಲಿ).

**23. ವಿಶೇಷ ಸೂಚನೆಗಳು:**

I. ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತ ಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು ಮತ್ತು ಶುಲ್ಕ ಪಾವತಿಯ ಚಲನ್‌ಅನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಕಾಯ್ದಿಟ್ಟುಕೊಳ್ಳತಕ್ಕದ್ದು. ನಂತರ ಯಾವುದೇ ಹಂತದಲ್ಲಿ ಪ್ರಾಧಿಕಾರಕ್ಕೆ ಮನವಿಯನ್ನು ಸಲ್ಲಿಸಿದ್ದಲ್ಲಿ ಅರ್ಜಿ ಪ್ರತಿಯನ್ನು ನೀಡಲಾಗುವುದಿಲ್ಲ.

II. ಅಭ್ಯರ್ಥಿಗಳು ಆನ್ ಲೈನ್ ಮೂಲಕ ಸಲ್ಲಿಸಲಾಗುವ ಅರ್ಜಿಯಲ್ಲಿ ಯಾವುದೇ ಹಂತದಲ್ಲಿ ಅಥವಾ ಯಾವುದೇ ರೀತಿಯ ತಿದ್ದುಪಡಿಗಳನ್ನು ಮಾಡುವಂತೆ ಕೋರಿದ್ದಲ್ಲಿ, ಸದರಿ ಮನವಿಯನ್ನು ಪುರಸ್ಕರಿಸಲಾಗುವುದಿಲ್ಲ.

III. ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಆಯ್ಕೆ ಯಾದ ಪಕ್ಷದಲ್ಲಿ ಅವರುಗಳ ನೇಮಕಾತಿ ಪ್ರಾಧಿಕಾರಗಳಿಂದ ನಿಗದಿತ ನಮೂನೆಯಲ್ಲಿ ನಿರಾಕ್ಷೇಪಣಾ ಪ್ರಮಾಣಪತ್ರ / ಅನುಮತಿಯನ್ನು / ಸೇವಾ ಪ್ರಮಾಣಪತ್ರವನ್ನು ಪಡೆದಿಟ್ಟುಕೊಂಡು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಸೇವಾ ವಿವರಗಳನ್ನು ಅರ್ಜಿಯಲ್ಲಿ ನಮೂದಿಸಬೇಕು. ಸುಳ್ಳು ಮಾಹಿತಿಯನ್ನು ನಮೂದಿಸಿದ್ದಲ್ಲಿ ಅನರ್ಹಗೊಳಿಸಲಾಗುವುದು.

IV. ಶುಲ್ಕ ಪಾವತಿಸಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಕೊನೆಯ ದಿನಾಂಕವಾಗುವುದು.

V. ಅಭ್ಯರ್ಥಿಯು ಅರ್ಜಿಯಲ್ಲಿ ನೀಡುವ ಮೊಬೈಲ್ ಸಂಖ್ಯೆ/ಇ-ಮೇಲ್ ಅಂತಿಮವಾಗಿದ್ದು, ಎಲ್ಲಾ ಮಾಹಿತಿಗಳನ್ನು ಅದೇ ಮೊಬೈಲ್ ಸಂಖ್ಯೆ/ಇ-ಮೇಲ್ ಗೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

VI. ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯ ಪರೀಕ್ಷೆಗೆ ಹಾಜರಾಗಿ, ಅರ್ಜಿಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಫಲಿತಾಂಶ ಪ್ರಕಟವಾಗದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳು ಅರ್ಜಿಸಲ್ಲಿಸುವಂತಿಲ್ಲ.

VII. ಅಭ್ಯರ್ಥಿಯು ಸಲ್ಲಿಸುವ ವಿದ್ಯಾರ್ಹತೆಯ ಪ್ರಮಾಣಪತ್ರ /ಇನ್ನಿತರೆ ಮೀಸಲಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಯಾವುದೇ ಗೊಂದಲಗಳು ಇದ್ದಲ್ಲಿ ಸಂಬಂಧಪಟ್ಟ ಪ್ರಾಧಿಕಾರಸ್ಥರು ಗೊಂದಲ ನಿವಾರಣೆ ಮಾಡುವವರೆಗೆ ಅವರ ಆಯ್ಕೆಯನ್ನುಅಂತಿಮಗೊಳಿಸಲಾಗುವುದಿಲ್ಲ.

VIII. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಮೊದಲು ವೆಬ್‌ಸೈಟ್‌ನಲ್ಲಿ ನೀಡಿರುವ ವಿವರವಾದ ಪ್ರಕಟಣೆಯನ್ನು /ಸೂಚನೆಗಳನ್ನು /ವಿಧಾನವನ್ನು ತಿಳಿದುಕೊಳ್ಳುವುದು ಹಾಗೂ ಅರ್ಜಿಯಲ್ಲಿ ಘೋಷಿಸಿರುವ ಮಾಹಿತಿಗಳು ಅಂತಿಮವಾಗಿದ್ದು, ಹೆಚ್ಚಿನ ಮಾಹಿತಿ / ದಾಖಲೆಗಳ ಸಲ್ಲಿಕೆಗೆ ಅವಕಾಶವಿರುವುದಿಲ್ಲ.

IX. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.

X. ಆಯ್ಕೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಯಾವುದೇ ವಿಧವಾದ ಅಪಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಯಾವುದೇ ಮುನ್ಸೂಚನೆ ನೀಡದೆ ಅವರನ್ನು ಆಯ್ಕೆಗೆ ಅನರ್ಹಗೊಳಿಸಲಾಗುವುದು.

XI. ಅಭ್ಯರ್ಥಿಗಳು ಗಳಿಸಿದ ಅಂಕಗಳ ಅಂಕಪಟ್ಟಿಯನ್ನು ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ ಇವರಿಗೆ ಹಸ್ತಾಂತರಿಸಲಾಗುವುದು. ಭೂಮಾಪನ ಇಲಾಖೆಯ ನಿಯಮಾನುಸಾರ ಲಿಖಿತಪರೀಕ್ಷೆಯ ನಂತರದ ಎಲ್ಲಾ ಪ್ರಕ್ರಿಯೆಗಳನ್ನು ನಡೆಸಲಾಗುವುದು.

**24. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:**

* ಮಾಹಿತಿಕೇಂದ್ರ - 080-23460460. (10.00 AM to 6.00 PM) *

(ಅಧಿಸೂಚನೆ, ಲಿಖಿತ ಪರೀಕ್ಷೆ ಹಾಗೂ ಅಂಕಪಟ್ಟಿಯ ಕುರಿತು ಮಾತ್ರ ಪ್ರಾಧಿಕಾರಕ್ಕೆ ಕರೆಮಾಡಬಹುದಾಗಿರುತ್ತದೆ).

**25. ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವರೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದದಸ್ತಾವೇಜುಗಳನ್ನು ಸಲ್ಲಿಸಿರುವರೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವರೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವರೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ / ಸಂದರ್ಶನದಲ್ಲಿ ಅನುಚಿತಮಾರ್ಗವನ್ನು ಅನುಸರಿಸುತ್ತಿರುವರೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವರೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವರೆಂದು, ಕಂಡುಬಂದಲ್ಲಿ ಅವರು ಸ್ವತಃ ಕ್ರಿಮಿನಲ್ ನಿರ್ವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಗಮನಿಸಿ:

1. ಕೇವಲ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದಲ್ಲಿ, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾದಲ್ಲಿ ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ಈ ಮೇಲಿನ ವಿವಿಧ ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ನಿಗದಿಪಡಿಸುವ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡುಬಂದಲ್ಲಿ, ಸಂಬಂಧಪಟ್ಟ ಸಂಸ್ಥೆಗಳ ಪದವೃಂದ ಮತ್ತು ನೇಮಕಾತಿ ನಿಯಮಗಳು ಅನ್ವಯವಾಗುತ್ತವೆ.

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಅ. | ಸಾಮಾನ್ಯಅರ್ಹತೆ | GM | General Merit |
| ಪ.ಜಾ.<br>(ಪ್ರ-ಎ)<br>(ಪ್ರ-ಬಿ)<br>(ಪ್ರ-ಸಿ) | ಪರಿಶಿಷ್ಟಜಾತಿ<br>(ಪ್ರವರ್ಗ-ಎ)<br>(ಪ್ರವರ್ಗ-ಬಿ)<br>(ಪ್ರವರ್ಗ-ಸಿ) | SC<br>(Cat-A)<br>(Cat -B)<br>(Cat -C) | Scheduled Caste<br>(Category -A)<br>(Category -B)<br>(Category -C) |
| ಪ.ಪಂ. | ಪರಿಶಿಷ್ಟಪಂಗಡ | ST | Scheduled Tribe |
| ಪ್ರ-1 | ಪ್ರವರ್ಗ-1 | Cat–1 | Category–1 |
| 2ಎ | ಪ್ರವರ್ಗ-2ಎ | 2A | Category – 2A |
| 2ಬಿ | ಪ್ರವರ್ಗ-2ಬಿ | 2B | Category – 2B |
| 3ಎ | ಪ್ರವರ್ಗ-3ಎ | 3A | Category – 3A |
| 3ಬಿ | ಪ್ರವರ್ಗ-3ಬಿ | 3B | Category – 3B |
| ಮಾ.ಸೈ. | ಮಾಜಿಸೈನಿಕ | XMP | Ex- Service Men<br>(Ex-Military person) |
| ಗ್ರಾಮೀಣ | ಗ್ರಾಮೀಣಅಭ್ಯರ್ಥಿ | Rural | Rural Candidate |
| ಕ.ಮಾ.ಅ. | ಕನ್ನಡಮಾಧ್ಯಮಅಭ್ಯರ್ಥಿ | KMS | Kannada Medium Student |
| ಯೋ.ಅ | ಯೋಜನಾನಿರಾಶ್ರಿತಅಭ್ಯರ್ಥಿ | PDP | Project Displaced Person |
| ಮ.ಅ | ಮಹಿಳಾಅಭ್ಯರ್ಥಿ | Wom | Woman Candidate |
| ತೃ.ಲಿ. | ತೃತೀಯಲಿಂಗ | TG | Transgender |

**ಕಾರ್ಯನಿರ್ವಾಹಕ ನಿರ್ದೇಶಕರು,**
**ಕರ್ನಾಟಕ ಪರೀಕ್ಷಾಪ್ರಾಧಿಕಾರ**

**ಸೂಚನೆ**: ಈ ಅಧಿಸೂಚನೆಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣಕ್ಕೆ ಸಂಬಂಧಿಸಿದಂತೆ, ನೇಮಕಾತಿ ಪ್ರಾಧಿಕಾರವು ಪರೀಕ್ಷೆ ದಿನಾಂಕಕ್ಕೆ ಮೊದಲು ಬದಲಾವಣೆ ಬಯಸಿದಲ್ಲಿ ಅಷ್ಟಕ್ಕೆ ಸೀಮಿತವಾಗಿ ಮಾತ್ರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ತಿದ್ದುಪಡಿ ಅಧಿಸೂಚನೆ ಹೊರಡಿಸಲಾಗುವುದು.

## ಮಿಕ್ಕುಳಿದ ಮೂಲ ವೃಂದದ 560 ಭೂಮಾಪಕರ ಹುದ್ದೆಗಳ ಮೀಸಲಾತಿ ವರ್ಗೀಕರಣ ಪಟ್ಟಿ

ಇಲಾಖೆಯ ಹೆಸರು : ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ.

ಹುದ್ದೆ: ಭೂಮಾಪಕರು

ವೇತನ ಶ್ರೇಣಿ: 37,500-76,100

| ಮೀಸಲಾತಿ | ಇತರೆ | ಮಹಿಳಾ | ಗ್ರಾಮೀಣ | ಮಾ.ಸ್ಯೈ. | ಕ.ಮಾ.ಅ. | ಯೋ.ನಿ.ಅ. | ಅಂ.ವಿ. | ತೃ.ಲಿ. | ಒಟ್ಟು |
|---|---|---|---|---|---|---|---|---|---|
| ಪ.ಜಾ- ಪ್ರ-ಎ | 4 | 10 | 8 | 3 | 1 | 1 | 2 (1* 1**) | 1 | 30 |
| ಪ.ಜಾ- ಪ್ರ-ಬಿ | 4 | 10 | 8 | 2 | 1 | 1 | 2 (1* 1**) | 1 | 29 |
| ಪ.ಜಾ- ಪ್ರ-ಸಿ | 3(1*) | 9(2*) | 6(2*) | 2(1*) | 1* | 1* | 2 (1* 1**) | 1* | 25 |
| ಪ.ಪಂ | 3 | 6 | 4 | 2 | 1 | 0 | 1* | 0 | 17 |
| ಪ್ರ.ವ-1 | 4 | 8 | 5 | 3 | 1 | 1 | 1*** | 0 | 23 |
| ಪ್ರ.ವ-2ಎ | 14 | 28 | 21 | 8 | 4 | 4 | 4 (1* 2** 1***) | 1 | 84 |
| ಪ್ರ.ವ-2ಬಿ | 4 | 7 | 5 | 3 | 1 | 1 | 1*** | 0 | 22 |
| ಪ್ರ.ವ-3ಎ | 4 | 7 | 5 | 3 | 1 | 1 | 1*** | 0 | 22 |
| ಪ್ರ.ವ-3ಬಿ | 5 | 9 | 8 | 2 | 1 | 1 | 2 (1** 1****) | 0 | 28 |
| ಸಾ.ಅ | 45 | 92 | 70 | 28 | 14 | 14 | 14 (3* 6** 2*** 3****) | 3 | 280 |
| ಒಟ್ಟು | **90** | **186** | **140** | **56** | **26** | **25** | **30** | **7** | **560** |

ಷರಾ:-

- ಪರಿಶಿಷ್ಟ ಜಾತಿಯ ಪ್ರವರ್ಗ-ಸಿ ಗೆ ಲಭ್ಯವಾಗುವ ಹುದ್ದೆಗಳಲ್ಲಿ ಶೇ 20 ರಷ್ಟು ಹುದ್ದೆಗಳನ್ನು ಪರಿಶಿಷ್ಟ ಜಾತಿಯ ಪ್ರವರ್ಗ-ಸಿ ಯಲ್ಲಿನ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಮೀಸಲಿರಿಸುವುದು. ಒಂದು ವೇಳೆ ಈ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಸೇರಿದವರು ಲಭ್ಯವಾಗದಿದ್ದಲ್ಲಿ ಈ ಹುದ್ದೆಗಳನ್ನು ಪ್ರವರ್ಗ 'ಸಿ' ಯ ಇತರೆ ಜಾತಿಗಳ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡುವುದು.

- ಪರಿಶಿಷ್ಟ ಜಾತಿಯ ಪ್ರವರ್ಗ-ಸಿ ಯಲ್ಲಿ ಅಂಗವಿಕಲರಿಗೆ ಲಭ್ಯವಾಗುವ 2 ಹುದ್ದೆಗಳಲ್ಲಿ 1 ಹುದ್ದೆಯನ್ನು ಶೇ 20 ರಷ್ಟು ಹುದ್ದೆಗಳನ್ನು ಪರಿಶಿಷ್ಟ ಜಾತಿಯ ಪ್ರವರ್ಗ-ಸಿ ಯಲ್ಲಿನ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಮೀಸಲಿರಿಸುವುದು. ಒಂದು ವೇಳೆ ಈ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಸೇರಿದವರು ಲಭ್ಯವಾಗದಿದ್ದಲ್ಲಿ ಈ ಹುದ್ದೆಗಳನ್ನು ಪ್ರವರ್ಗ 'ಸಿ' ಯ ಇತರೆ ಜಾತಿಗಳ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡುವುದು.

ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳ ವರ್ಗೀಕರಣವನ್ನು ನಿಯಮಗಳಂತೆ ಅಳವಡಿಸಿಕೊಳ್ಳಬೇಕಾಗಿ ಕೋರಿದೆ.

| | |
|---|---|
| a * | LV = Low Vision. |
| b ** | Locomotor Disability (OL, OA) including LC, DW, AAV SI/SD without neurological / Limb diysfunction, SI/SD with neurological / Limb diysfunction, having OL, OA. |
| c *** | HH = Hard of Hearing. |
| d **** | SLD, MI = Specific Learning Disability and Mental illness. |
| | MD = Multiple disabilities, involving (a) to (d) above |

ಆಯುಕ್ತರು,
ಭೂಮಾಪನ ಕಂದಾಯ ವ್ಯವಸ್ಥೆ ಮತ್ತು
ಭೂದಾಖಲೆಗಳ ಇಲಾಖೆ, ಬೆಂಗಳೂರು.

## SYLLABUS FOR THE POST OF SURVEYOR OF SURVEY SETTLEMENT AND LAND RECORDS DEPARTMENT

PAPER-II: SPECIFIC PAPER – The content of this paper shall be determined by the Recruitment Committee, keeping in view the nature of the job for which the selection is being made and the qualifying examination in consultation with the appointing authority.

## MATHEMATIS (40%)

### ARITHEMATIC

### NUMBER SYSTEM

**1. SQUARES AND SQUARE ROOTS, CUBES AND CUBE ROOTS**

a. Geometrical pattern of square numbers, squares of decimals and fractions square roots
b. Determination of square root of perfect square root
c. Estimation of sq. Root of a non perfect square
d. Cubes and cube roots
e. To find cube root by factor method
f. Identification of sq numbers
g. To find square root of perfect sq no's by factor method
h. To find sq. Of perfect sq. No., decimals and no's which are not perfect.
i. To find the smallest number that has to be added or subtracted from a given no. To make it a perfect sq. No.
j. Process of finding the square root by division method

**2. SET THEORY**

a. Representation of a set
b. Types of sets
c. Definition of union intersection, Compliment and difference of sets.
d. Venn .diagrams
e. Operation of sets
f. Union, intersection, Compliment and difference of sets. Representation using Venn diagrams
g. Properties of union and intersection of sets
h. De Morgan's laws of sets
i. Relation b/w no of elements of sets

**3. SEQUENCE**

a. Definition of sequence and series
b. Meaning and specified terms of ap, gp, and hp
c. Sum of terms in ap and gp
d. Relation b/w am, gm and hm

**4. MATRICES**

a. Definition, a. Route maps
b. Tabular information
c. Order of matrix
d. Types of matrices

e. Equality of matrices
f. Classification based on their elements and order
g. Matrices and transpose of a matrix.
h. Conditions necessary for addition, subtraction and multiplication of matrices.

## 5. PERMUTATIONS AND COMBINATIONS

Concept of permutations and combinations
a. Distinguish b/w permutations and combinations
b. Factorial notation
c. Meanings of ${}_np^r$ and ${}_nc^r$.

## 6. STATISTICS
a. Frequency distribution table
b. Graphical representation table .tabular representation. Pie chart
c. Mean Measures of central tendency
d. Arithmetic of ungrouped data, median
e. Mean. Median and mode for grouped data
f. Range. Quartile. Deviation and mean deviation
g. Statistical measures
h. Histogram and frequency polygons
i. Collection of data
j. Calculation of mean, median and mode for ungrouped data
k. Preparation of Bar chart and Sector graph
l. Standard deviation
m. Standard deviation of ungrouped data
n. Standard deviation of grouped data
o. Coefficient of variations

## 7. H.C.F and L.C.M.
a. Application of H.C.F.
b. Application of H.C.F. in factorization.
c. Lowest common multiple.

# ALGEBRA

## 1. BASICS OF ALGEBRA
a. Basic terms
b. Various algebraic terms
c. Operations with literal signed numbers
d. Use of symbols

## 2. MULTIPLICATION OF ALGEBRAIC EXPRESSIONS
a. Multiplication of binomials
b. Special products
c. Squaring of trinomial
d. Expressions $(a+b)^2$; $(a-b)^2$;$(a+b)(a-b)$; $(a+b+c)^2$

## 3. LINEAR EQUATIONS
a. Solving a linear equation
b. Balance scales

c. Applications of linear equations
d. Rectangular coordinate systems and graphs
e. Quadrants and convention of signs
f. Graph in linear equations

**4. QUADRATIC EQUATIONS**

a. Pure quadratic equation
b. Affected quadratic equation by factorization
c. Solving quadratic equation by formula method
d. Equation reducible to the form ax2+bx+c=O.
e. Problems based on quadratic equations.
f. Nature of roots ·of a quadratic equations.
g. Relationship b/w roots and coefficient to the terms of quadratic equations.
h. To form an equation for the given roots
i. Graphical method of solving a quadratic equation

**5. FACTORJSATION OF ALGEBRAIC EXPRESSIONS:**

a. Factorisation of trinomials.
b. Factorisation of trinomials using algebraic tiles.
c. Factorisation of quadratic trinomial of the $ax^2 + bx + c$
d. Factorise expressions of the form $a^2 + 2ab + b^2$, $a^2 - 2ab + b^2$
   And $a^2 - b^2$ using identities.
e. Factorisation using standard identities.

**6. HCF & LCM OF BINOMIALS AND TRINOMIALS.**

a. Explain the meaning of HCF and LCM of algebraic expression.
b. Find the HCF and LCM of binomials and trinomials.

**7. CO-ORDINATES-PLANE GEOMETRY**

a. Plotting of graph- simple equations.
b. How to calculate values along an axis while the values along another axis is given

## GEOMETRY

**1. AXIOMS AND POSTULATES**

Axioms-1,2,3,4,5 & 6
Postulates-1,2,3,4,5 & 6

a. Definition's
b. Enunciations (statements)
c. Definition and properties of point, ray and lines
d. Linear pair
e. Properties of vertically opposite angles
f. Parallel lines, transversals
g. Properties of corresponding angles formed when transversal intersects 2 parallel straight lines.
h. Properties of lines which are parallel to the same line.

**2. THEOREMS**

a. Converse of a theorem
b. Theorems on parallel -pairs of alternate angles
   -pairs of interior angles

**3. POLYGONS**

a. Definition, diagonals and interior regions of polygons
b. Identification of polygons, Inscribing regular polygons
c. Differentiation b/w regular and irregular polygons
d. Inscribe regular pentagon. Hexagon and octagon
e. Definition of well conditioned polygons
f. Properties of well conditioned polygons

**4. TRIANGLES**

1. Classification of triangles, exterior angles of triangle, sum of 3 angles Is 180'
2.
   a. Proving theorems logically with reference to angles
   b. Developing deductive reasoning ability
   c. Riders based on theorems
3.
   a. Construction of triangles
   b. Steps of constructions
   c. Construction of equilateral triangle
   d. Right angled triangle

**5. CONGRUENCE OF TRIANGLES**

a. Meaning of congruence
b. Congruency of triangles
c. Postulates related to congruency of triangles
d. S.A.S Postulates
e. S.S.S Postulate
f. A.S.A Postulates
g. Right hypotenuse, side postulate

**6. CONCURRENT LINES OF A TRIANGLE**

a. Altitude of a triangle
b. Construction of altitude of triangle
c. Steps of construction
d. Medians of triangle-steps of construction
   - Properties of centroid
   - Drawing perpendicular bisectors to the sides of triangle
   - Position of circum circle
   - To draw angular bisectors
   - In centre, in circle
   - Steps of construction

**7. QUADRILATERALS**

1. Definition, identification.
   Writing ten elements of a given quadrilateral properties
   Construction of quadrilateral to given measurements
   Calculation of area of a quadrilateral using the formula

**8. TYPES OF QUADRILLATERALS**

a. Identification of different types, consecutive angles

b. Properties of each type of quadrilateral
c. Construction of parallelograms, Rhombus us, trapezia to given measurements
d. Calculation of area of parallelograms, rhombus and trapezium using formula

**9. THEOREMS ON PARALLELOGRAMS**

a. Properties of parallelograms
b. Meaning of corollary
c. Corollaries of theorems

**10. MID POINT THEORM**

a. Definition
b. Prove mid-point theorem logically
c. Converse of mid-point theorem
d. Solving problems and riders based on mid-point theorem.

**11. AREAS**

a. Identification and stating the properties of parallelograms
b. Standing on same base and b/w same parallels
c. Theorems on areas of parallelograms logically
d. Solving problems and riders based on the theorems.

**12. CYCLIC QUADRILATERALS**

a. Definition
b. Properties
c. Theorems
d. Construction
e. Problems and riders based on theorems on cyclic quadrilaterals.

**13. SURFACE, AREAS AND VOLUMES OF SOLIDS**

a. Definition of prism and pyramid
b. Properties of prism and pyramid
c. Difference b/w prism and pyramid
d. Surface area of prisms and pyramids
e. Volume of prisms and pyramids

**14. CIRCLES**

a. Definition of circle, radius, circumference, diameter, chord, arc and segment.
b. Chord property of circle
c. Central angle and inscribed angle
d. Theorem on angle property of the circle
e. Problems and riders based on properties of circle
f. To draw a chord of given length in a circle
g. To find distance b/w the centre and chord of a circle
h. To show that equal chords of a circle are equidistant from the centre.
i. Construction of a segment of a circle
j. Concentric circles
k. Congruent circles
l. Secant and tangents
m. To draw a tangent at a point on a circle

n. Relation b/w radius, point of contact and tangent of a circle
o. To draw a tangent to a circle from an external point
p. Properties of tangents
q. To draw a direct tangent to 2 circles of different radii
r. To construct transverse common tangents to 2 circles

**15. THEOREMS ON TRIANGLES AND CIRCLES**

a. Concept of similarity
b. Similarity of triangles
c. Basic proportionally theorem
d. Corollary of basic proportionality theorem
e. Theorems on similar triangles
f. Areas of similar triangles

**16. RIGHT ANGLES TRIANGLE**

a. Pythagoras theorem
b. Touching circles
c. Distance b/w the centre of touching circles.
d. Properties of tangents drawn to a circle from an external point.

## PHYSICS (10%)

**1. MAGNETISM**

1.1) Natural Magnets.
1.2) Artificial Magnets,
1.3) Properties of Magnets
   (a) Magnetic field -Detection of the presence eta Magnetic field.

1.4) Magnetic substances.
   (a) Non magnetic substances.
   (b) Diamagnetic Magnetic materials
   (c) Paramagnetic materials
   (d) Ferromagnetic materials
1.5) Preparing magnets.
   (a) Mechanical method
   (b) Electrical method
1.6) Uses of magnets
   (a) Protection of magnetism-Earth's magnetism
1.7) Magnetic lines of force around a bar magnet
1.8) Electro magnetism
1.9) Instruments using magnetic effect of electric current

**2. ELECTRICITY**

2.1) Units of Electricity
   (a) Electric Power- Units of Electric power
2.2) Practical Unit of electricity
2.3) Effects of electric current
   (a) Magnetic effect of electric current
   (b) Chemical effect Of electric current
   (c) Heating effect of electric Current
2.4) Electric fuse

(a) Electric bulb

2.5) Sources of electricity

(a) Electric cell

(b) Dry cell

2.6) Electro motive force

**3. ELECTROMAGNETIC RADIATION**

3.1) Introduction

3.2) Electromagnetic Radiation

3.3) Properties of electromagnetic waves

3.4) Electromagnetic spectrum

3.5) Uses of electromagnetic Radiation

(a) Light

(b) Infrared radiations

- Applications of infrared rays

(c) Ultraviolet radiations

- Applications of ultraviolet rays

(d) X-rays

(e) Gamma rays

(f) Micro waves

(g) Radio waves

3.6) Laser

- Characteristics of laser radiation

**4. ELECTRONICS.**

4.1) Radio

- Introduction
- Radio communication
- Radio transmitter
- Radio receiver

4.2) Television

**5. DYNAMICS**

a. Motion.

b. What is motion.

c. Distance travelled, displacement

d. Speed Velocity

e. Acceleration

f. Graphic representation of motion

g. Equation of motion

h. Periodic motion

i. Simple pendulum - an application of oscillatory motion

I. Law of simple pendulum

II. Law of the pendulum

III. Law

- Uses of simple pendulum

j. Periodic motion – Waves

k. Wave motion.

l. Energy - motion - mechanical work

m. Energy – forms, sources

n. Newton's Laws of motion

I. Law
II. Law
III. Law

o. Acceleration due to Gravity

p. Equations of motion of bodies moving under the Influence of gravitational force

## 6. HEAT

6.1) Nature of heat
6.2) Heat & Temperature
6.3) Temperature scales
6.4) Relationship between Fahrenheit & Celsius scales of Temperature
6.5) Relationship between Celsius & Kelvin scales of Temperature
6.6) Measurement of temperature
(a) Mercury thermometer
(b) Clinical thermometer
(c) Maximum - minimum thermometer
6.7) Units of Heat
6.8) Changes of state of substances due to heat
6.9) Effects of heat
(a) Thermal expansion of bodies due to heat
(b) Linear expansion in solids

## 7. LIGHT

7.1) Importance of light
7.2) Refraction of light
7.3) Laws of refraction of light
7.4) Refractive index
7.5) Effects of refraction of light
7.6) Total Internal reflection
7.7) Applications of total internal reflection
(a) In optical instruments
(b)Optic fiber cables
(c) Sparkling of diamond
(d) Bicycle reflector
7.8) Mirage -Total internal reflection in nature
7.9) Refraction in a prism - Dispersion
7.10) Dispersion of light in nature
7.11) Lenses
7.12) Refraction of light through lenses.
7.13) Thin lens as an array of prisms.
7.14) Some parameters pertaining to lenses
7.15) Rules of signs in obtaining images by lenses.
7.16) Formation of images in lenses.
7.17) Formation of images by convex lens.
7.18) Formation of images by concave lens.
7.19) Uses of lenses – short sightedness or Myopia.
Long sightedness or Hypermetropia.
7.20) Optical instruments
7.21) Simple microscope

7.22) Camera
7.23) Compound microscope
7.24) Telescope
7.25) Binoculars
7.26) Dispersion & Spectrum
- Cause of dispersion
- Pure spectrum
- Visible spectrum
- Spectroscope
- Uses of spectroscope

7.27) Raman effect
- Introduction
- Discovery

**8. SOUND**

8:1) Introduction
8 .2) Ultrasonic sound
8.3) Uses of Ultrasonic waves
8.4) Sonar & Ultrasonic scanner
(a) Sonar
- How does sonar work

(b) Ultrasound scanner
8.5) Doppler effect in Sound & light
(a) Doppler effect in Sound
(b) Doppler effect in Light
8.6) Applications of Doppler effect

**9. GRAVITATION**

9.1) Introduction
9.2) Universal law of Gravitation
9.3) Gravity near the Earth's surface
- Weight
- Weightlessness
- Variation of g:

9.4) Importance of the law of Gravitation

**GEOGRAPHY(10%)**

**1. THE EARTH**

- The Universe - Shape of the Earth
- The Axis of the Earth
- Rotation – Revolution
- Important lines of latitudes and Zones - Latitudes and Longitudes & Longitudes and time
- Zonal time
- International dateline

2. **THE LITHOSPHERE**
    - Layers of the Earth
    - Rocks and Weathering of Rocks
    - Earth Quakes & Volcanoes
        (a) Primary Waves
        (b) Secondary Waves
        (c) Long Waves

3. **MAPS**
    - Characteristics of maps
    - Types of maps - Large scale/small scale
    - Thematic maps - Globes

4. **PHYSICAL FEATURES OF INDIA**
    - Location and Extent
    - Northern Mountains
    - North Indian Plateau
    - The Peninsular Plato
    - Coastal Plains and Islands
    - Rivers and Lakes of India

## Modern methods of surveying (20%)

**Photogrammetry And Aerial Survey:** Introduction, definition, basic principles, methods, importance of scale, height, applications. Satellite Imagery – types of satellites (optical, multispectral, hyper spectral, SAR), satellite image acquisition, resolution (spatial, spectral, temporal, radiometric), satellite imagery processing – rectification, orthorectification, mosaicking, classification and information extraction; softwares used (Earth Engine, GIS Image Analyst). Drone (UAV) Imagery – types of drones, drone survey planning, Ground Control Points (GCPs), drone image acquisition; drone imagery processing – Structure from Motion (SfM), point cloud generation, Digital Elevation Model (DEM) / Digital Surface Model (DSM) generation, Orthomosaic / Ortho-Rectified Image (ORI) generation; softwares used.

**Remote Sensing:** Introduction, principle of remote sensing, EMR types, Resolutions, types of satellites, types of sensors, LIDAR, visual and digital image processing and its application.

**Global Positioning Systems (GPS):** Definition, principles of GPS and its applications.

**Geographical Information System (GIS):** Introduction and principle of GIS, components of GIS and its applications.

**Advanced Positioning and Satellite Communication Technology in Surveying:** GPS (Global Positioning System): NAVSTAR GPS architecture, signal structure, trilateration principle, types of errors and corrections. DGPS (Differential GPS): concept, base station and rover

configuration, real-time and post-processed differential correction, accuracy levels. GNSS Rovers: RTK (Real Time Kinematic) surveying, CORS (Continuously Operating Reference Station) network – Karnataka State CORS Network, NTRIP protocol, field data collection with GNSS Rovers, precision in cadastral surveys. Satellite Communication Technology: GNSS satellite constellations (GPS, GLONASS, Galileo, NavIC/IRNSS), signal frequencies, satellite geometry and DOP values. Related Softwares: GNSS data processing software), post-processing and network adjustment tools, integration with GIS.

## Computer Applications (20%)

i) **MS Office- MS Word, MS Excel, MS Powerpoint:** AutoCAD: Introduction to AutoCAD software, all commands in AutoCAD, drawing simple figures, triangles, rectangles, Text writing, hatching, development of 2D and 3D elements, extrusion, mirror option, etc., Operations using AutoCAD. Working with DXF files – import, export and editing of cadastral DXF data in AutoCAD.

ii) **GIS Softwares and their Applications:** Introduction to GIS software environment. ( GIS) – open-source desktop GIS: installation, interface, loading vector and raster data, layer management, attribute table operations, spatial queries, digitizing and editing vector layers, styling and symbology, map layout and printing, plugins and extensions, coordinate reference system (CRS) management; use in cadastral mapping,. Geo Server / Map Server – open-source GIS servers for publishing OGC web services (WMS, WFS, WCS). Post GIS – spatial extension to PostgreSQL for storing and querying geographic data.

iii) **Basics of Software Solutions and Land Records Information Technology:** Software development lifecycle (SDLC) – how software applications are designed, developed, tested and deployed. Web application development concepts, web portals and citizen service portals. Mobile application development for field. offline-first design, geo-tagging, digital signature (eSign /DSC), sync with central server. Basics of how spatial and textual data is procured, stored and retrieved: State Data Centre (SDC) / architecture, database storage concepts, data access and retrieval methods. Application Programming Interface (API) – concept of REST( Representational State Transfer) and SOAP( Simple Object Access Protocol) APIs, API Gateway, integration of mobile apps with backend databases and web portals. Web portal design and user experience (UX)( User Experience) fundamentals. Java, Json, XML, HTML, HTTPS.

Commissioner,
Survey Settlement and
Land Records, Bangalore.